ಅವಶ್ಯಕತೆ ಕಂಡು ಬರುವುದಿಲ್ಲ.

3) ಸಮಾಜ ಕಲ್ಯಾಣ ಇಲಾಖಾವತಿಯಿಂದ ''ಅಂಗನವಾಡಿ ಕೇಂದ್ರ'' ತೆರೆಯುವ ಯೋಜನೆ ಇರುವುದಿಲ್ಲ. ಆದಾಗ್ಯೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖಾವತಿಯಿಂದ ಕೇಂದ್ರ ಸರ್ಕಾರದಿಂದ ಅನುಮೋದನೆ ದೊರೆತ ನಂತರ ಹೆಚ್ಚುವರಿ 11 ಅಂಗನವಾಡಿ ಕೇಂದ್ರಗಳನ್ನು ತೆರೆಯಲು ಉದ್ದೇಶಿಸಲಾಗಿದೆ.

ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಮಂಜೂರಾತಿ.

252(247)

ಶ್ರೀ ಸಿ.ಚನ್ನಿಗಪ್ಪ(ಕೊರಟಗೆರೆ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕಿನಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡದ ಹಾಗೂ ಹಿಂದುಳಿದ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು? ಈ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು?

2) ಈ ವಿದ್ಯಾರ್ಥಿನಿಲಯಗಳು ಶಿಥಿಲಾವಸ್ಥೆಯಲ್ಲಿದ್ದು ಇವುಗಳನ್ನು ಇದುವರೆವಿಗೂ ದುರಸ್ತಿಗೊಳಿಸದಿರುವುದು ಸರ್ಕಾರದ ಗಮನಕ್ಕೆಬಂದಿದೆಯೇ?

3) ಈ ವಿದ್ಯಾರ್ಥಿನಿಲಯಗಳನ್ನು ದುರಸ್ತಿಗೊಳಿಸಿ ವಿದ್ಯಾರ್ಥಿಗಳ ವ್ಯಾಸಂಗಕ್ಕಾಗಿ ಅನುಕೂಲ ಮಾಡಿಕೊಡುವರೆ?

4) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕಿನಲ್ಲಿ ಹೊಸದಾಗಿ ಪರಿಶಿಷ್ಟ ಜಾತಿ : ಪರಿಶಿಷ್ಟ ವರ್ಗಗಳ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಮಂಜೂರಾತಿಗೆ ಸರ್ಕಾರದ ಮುಂದೆ ಪ್ರಸ್ತಾವನೆಗಳು ಇರುವುದೇ? ಹಾಗಿದ್ದಲ್ಲಿ, ಯಾವಾಗ ಪ್ರಸ್ತಾವನೆಗೆ ಮಂಜುರಾತಿ ನೀಡಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

1) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕಿನಲ್ಲಿ ವಿದ್ಯಾರ್ಥಿನಿಲಯಗಳ ಸಂಖ್ಯೆ ಹಾಗೂ ವಿದ್ಯಾರ್ಥಿಗಳ ಸಂಖ್ಯಾಬಲ ಈ ಕೆಳಕಂಡಂತೆ ಇರುತ್ತದೆ:

	ವಿದ್ಯಾರ್ಥಿನಿಲಯಗಳ ಸಂಖ್ಯೆ	ವಿದ್ಯಾರ್ಥಿಗಳ ಸಂಖ್ಯಾ ಬಲ
ಸಮಾಜ ಕಲ್ಯಾಣ ಇಲಾಖೆ	5	271
ಹಿಂದುಳಿದ ವರ್ಗಗಳ ಇಲಾಖೆ	5	193
ಒಟ್ಟು	10	464

2) ಕೊರಟಗೆರೆ ತಾಲ್ಲೂಕಿನಲ್ಲಿ ಯಾವುದೇ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಲಯಗಳು ಶಿಥಿಲಾವಸ್ಥೆಯಲ್ಲಿ ಇರುವುದಿಲ್ಲ. ಸದರಿ ವಿದ್ಯಾರ್ಥಿನಿಲಯಗಳಿಗೆ ಆಗಿಂದಾಗ್ಗೆ ಸಣ್ಣಪುಟ್ಟ ರಿಪೇರಿ ಕಾಮಗಾರಿಗಳನ್ನು ಮಾಡಿಸಲಾಗುತ್ತಿದೆ.

ಹಿಂದುಳಿದ ವರ್ಗಗಳ ಇಲಾಖೆಯ 5 ವಿದ್ಯಾರ್ಥಿನಿಲಯಗಳ ಪೈಕಿ 3 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈ ಕಟ್ಟಡಗಳಿಗೆ ಸಣ್ಣಪುಟ್ಟ ದುರಸ್ತಿ ಮಾಡಬೇಕಾಗಿದೆ.

3) ಮಾಡಲಾಗುವುದು

4) ಪ್ರಸಕ್ತ ಸಾಲಿನಲ್ಲಿ ಆಯವ್ಯಯ ಲಭ್ಯತೆಗೆ ಅನುಗುಣವಾಗಿ ವಿದ್ಯಾರ್ಥಿನಿಲಯಗಳನ್ನು ಈಗಾಗಲೇ ಮಂಜೂರು ಮಾಡಲಾಗಿದೆ. ಹೆಚ್ಚುವರಿಯಾಗಿ ಈ ಹಂತದಲ್ಲಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಕಾರ್ಯಕ್ರಮವಿರುವುದಿಲ್ಲ.

ಕೊರಟಗೆರ ತಾಲ್ಲೊಕಿನ ನಗರದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ.

254(249)

ಶ್ರೀ ಸಿ.ಚೆನ್ನಿಗಪ್ಪ(ಕೊರಟಗೆರೆ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?